# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1143 (1410) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ |
| ಉತ್ತರಿಸುವ ದಿನಾಂಕ | : | 30-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಲ್ಯಾಪ್ ಟಾಪ್ ವಿತರಿಸಲಾಗಿದೆಯೇ; | 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. 2018-19ನೇ ಸಾಲಿನಿಂದ ಸದರಿ ಕಾರ್ಯಕ್ರಮವನ್ನು ಇ-ಆಡಳಿತ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡಲಾಗುತ್ತಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದ ಮೂಲಕ ಅನುಷ್ಠಾನ ಮಾಡಲಾಗುತ್ತಿದೆ.<br><br>ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ ನವೆಂಬರ್ 2022 ರಿಂದ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಅಕ್ಟೋಬರ್ 2022 ಮಾಹೆಯಿಂದ ಅವಕಾಶ ಕಲ್ಪಿಸಲಾಗಿರುತ್ತದೆ. ಅರ್ಜಿ ಸಲ್ಲಿಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಇದುವರೆವಿಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಒಟ್ಟು 7,60,559 ಅರ್ಜಿಗಳು ಸ್ವೀಕೃತಗೊಂಡಿದ್ದು, 4,12,858 ಅರ್ಜಿಗಳು ಅನುಮೋದನೆಯಾಗಿರುತ್ತದೆ. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಒಟ್ಟು 93,631 ಅರ್ಜಿಗಳು ಸ್ವೀಕೃತಗೊಂಡಿದ್ದು, 6,519 ಅರ್ಜಿಗಳು ಅನುಮೋದನೆಯಾಗಿರುತ್ತದೆ.<br><br>ಸಮಾಜ ಕಲ್ಯಾಣ ಇಲಾಖೆಯಡಿ ಲ್ಯಾಪ್ ಟಾಪ್ ವಿತರಣೆ ಯೋಜನೆ ಜಾರಿಯಲ್ಲಿ ಇರುವುದಿಲ್ಲ. ಉನ್ನತ ಶಿಕ್ಷಣ ಇಲಾಖೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಿಸುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ವಿತರಿಸಿರುವುದಿಲ್ಲ. |

| | | |
|---|---|---|
| ಆ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಮೀಸಲಿರಿಸಿದ ಅನುದಾನವನ್ನು ಅನ್ನ ಭಾಗ್ಯ ಮತ್ತು ಸಂಧ್ಯಾ ಸುರಕ್ಷ ಯೋಜನೆಗೆ ವರ್ಗಾಯಿಸುತ್ತಿರುವುದಕ್ಕೆ ಕಾರಣವೇನು? | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಮೀಸಲಿರಿಸಿದ ಅನುದಾನವನ್ನು ಅನ್ನ ಭಾಗ್ಯ ಮತ್ತು ಸಂಧ್ಯಾ ಸುರಕ್ಷ ಯೋಜನೆಗೆ ವರ್ಗಾಯಿಸಿರುವುದಿಲ್ಲ. |
| ಇ) | ಈ ಯೋಜನೆಗಳಿಗೆ ಸರ್ಕಾರ ಸಮರ್ಪಕವಾಗಿ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು? | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುದಾನದ ಕೊರತೆ ಇರುವುದಿಲ್ಲ.<br><br>ಲ್ಯಾಪ್ ಟಾಪ್ ವಿತರಣೆಗೆ ಹೆಚ್ಚುವರಿ ಅನುದಾನವನ್ನು ಉನ್ನತ ಶಿಕ್ಷಣ ಇಲಾಖೆಗೆ ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. |

**ಸಕಇ 607 ಪಕವಿ 2022**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ**
**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**